KAUK910010782025



**<u>ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ,</u>**

**<u>ಸಿದ್ದಾಪುರ</u>**

**<u>ಸಿ.ಸಿ ನಂ. 659/2025</u>**

ಫಿರ್ಯಾದಿಃ ಅಕ್ಷಯ ಕೋ- ಆಪ್ ಕ್ರೆಡಿಟ್ ಸೊಸೈಟಿ ಲಿ. ಕಾರವಾರ ಬ್ರಾಂಚ ಸಿದ್ದಾಪುರ ಇದರ ವತಿಯಿಂದ ಶಾಖಾ ವ್ಯವಸ್ಥಾಪಕರು, ಸಿದ್ದಾಪುರ ಶಾಖೆ, ಸಿದ್ದಾಪುರ

-ವಿರುದ್ದ-

ಆರೋಪಿಃ **ಲೋಹಿತ ಕಮಲಾಕರ ಕೊಡಿಯಾ**, 32 ವರ್ಷ ,
ವಾಸಃ ಈರಮ್ಮ ಓಣಿ, ಬಿಳಗಿ, ಪೋಃ ಬಿಳಗಿ, ತಾಃ ಸಿದ್ದಾಪುರ.
ಉತ್ತ ರ ಕನ್ನಡ-581322

**<u>ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆ ಕಲಂ 351 ರಡಿ ಆರೋಪಿಯ ಹೇಳಿಕೆ</u>**

**ಪ್ರಶ್ನೆಃ1** ನ್ಯಾಯಾಲಯದ ಮುಂದೆ ಅಭಿಯೋಜನೆಯ ಪರವಾಗಿ ನಡೆದ ವಿಚಾರಣೆಯಲ್ಲಿ ಸಾಕ್ಷಿದಾರರ ಹೇಳಿಕೆಗಳನ್ನು ಕೇಳಿದ್ದೀಯಾ?

**ಉತ್ತರಃ**

**ಪ್ರಶ್ನೆಃ 2. ಫ್ರಾಸಾ-1 ಶ್ರೀ ಪ್ರವೀಣ ವೆಂಕಟ್ರಮಣ ಆಚಾರ್ಯ, ಮ್ಯಾನೇಜರ್** ತಮ್ಮ ಸಾಕ್ಷ್ಯದಲ್ಲಿ ಹೇಳಿದ್ದೇನೆಂದರೆ, ನ್ಯಾಯಾಲಯದ ವ್ಯಾಪ್ತಿಯಲ್ಲಿರುವ ಫಿರ್ಯಾದುದಾರರು ಅಕ್ಷಯ ಕೋ-ಆಪ್ ಕ್ರೆಡಿಟ್ ಸೊಸೈಟಿ ಲಿ. ಕಾರವಾರ ಬ್ರಾಂಚ ಸಿದ್ದಾಪುರ ಸಂಸ್ಥೆಯು ಕರ್ನಾಟಕ ಸೌಹಾರ್ದಾ ಕೋ-ಆಪರೇಟಿವ್ ಕಾಯ್ದೆ ರಡಿಯಲ್ಲಿ ನೊಂದಾಯಿತ ಸಂಸ್ಥೆಯಾಗಿದ್ದು ಹಣಕಾಸು ವ್ಯವಹಾರ, ಅಗತ್ಯವಿರುವವರಿಗೆ ಹಣವನ್ನು ಸಾಲವಾಗಿ ನೀಡುವ ಸೌಹಾರ್ದ ಸಹಕಾರಿ ಸಂಸ್ಥೆಯಾಗಿದ್ದು, ಆರೋಪಿತನಾದ ನೀನು ಫಿರ್ಯಾದುದಾರರ ಸಹಕಾರಿ ಸಂಸ್ಥೆಯಲ್ಲಿ ಸಾಲಕ್ಕಾಗಿ ಮನವಿ ಮಾಡಿದ್ದು, ನಂತರ ಸಾಲದ ಖಾತೆ ನಂ. BL-1101200001643 ಯಿಂದ ದಿನಾಂಕ 08.04.2024

ರಂದು ರೂ. 20,00,000/- ಗಳನ್ನು ಸಾಲ ಪಡೆದಿರುತ್ತೀಯಾ ಎಂದು ಸಾಕ್ಷವನ್ನು ನುಡಿದಿರುತ್ತಾರೆ, ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

**ಪ್ರಶ್ನೆ: 3 ಫ್ರಾಸಾಃ1** ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ಆರೋಪಿತನಾದ ನೀನು ಸಾಲದ ಕಂತುಗಳನ್ನು ಸರಿಯಾಗಿ ಪಾವತಿ ಮಾಡದೆ ಇದ್ದು, ಸದರಿ ಸಾಲದ ಈಗಿನ ಬಾಕಿ ಮೊತ್ತವು ರೂ. 5,00,000/- ಆಗಿದ್ದು ಹಾಗೂ ಫಿರ್ಯಾದುದಾರರ ಸಂಸ್ಥೆಯು ಹಲವು ಬಾರಿ ಸಾಲದ ಮರುಪಾವತಿಗಾಗಿ ಬೇಡಿಕೆ ಇಟ್ಟಿದ್ದು, ಸದರಿ ಸಾಲದ ಬಾಬ್ತಿಗಾಗಿ ದಿನಾಂಕ 08.10.2025 ರ ಕೆನರಾ ಬ್ಯಾಂಕ ಬಿಳಗಿ ಶಾಖೆಯ ಚೆಕ್ಕಿನ ಸಂಖ್ಯೆ: 394358 ನ ರೂ. 5,00,000/-ನ ಚೆಕನ್ನು ನೀಡಿರುವುದಾಗಿ ಸಾಕ್ಷ್ಯನುಡಿದಿರುತ್ತಾರೆ. ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

**ಪ್ರಶ್ನೆ: 4. ಫ್ರಾಸಾಃ1** ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ತದನಂತರ ಸಹಕಾರಿ ಸಂಸ್ಥೆಯು ಸದರಿ ಚೆಕನ್ನು ನಗದು ಗೊಳಿಸಲು ಸ್ಟೇಟ್ ಬ್ಯಾಂಕ ಆಪ ಇಂಡಿಯಾ ಸಿದ್ಧಾಪುರ ಶಾಖೆಗೆ ಹಾಕಿದಾಗ ನಿನ್ನ ಖಾತೆಯಲ್ಲಿ ಸಾಕಷ್ಟು ಹಣ ಇರದ ಕಾರಣ ದಿಃ 14-10-2025 ರಂದು "**Funds Insufficient**" ಎಂಬ ಹಿಂಬರಹದೊಂದಿಗೆ ವಾಪಸ್ ಬಂದಿರುವುದಾಗಿ ಮತ್ತು ಸದರಿ ವಿಷಯವನ್ನು ದಿಃ 29-10-2025 ರಂದು ಅವರ ವಕೀಲರ ಮೂಲಕ ನೋಟಿಸ್ಸು ನೀಡಿ ತಿಳಿಸಿರುವುದಾಗಿ, ಸದರಿ ನೋಟಿಸ್ಸುನ್ನು ಆರೋಪಿತನಾದ ನೀನು ದಿನಾಂಕ 01.11.2025 ರಂದು ಪಡೆದುಕೊಂಡಿದ್ದರೂ ಸದರಿ ಹಣವನ್ನು ನೀನು ಮರುಪಾವತಿ ಮಾಡದೇ **ನೆಗೊಷಬಲ್ ಇನ್ಸ್ಟ್ರುಮೆಂಟ್ ಆಕ್ಟ ರ 138** ಅಡಿಯಲ್ಲಿ ಅಪರಾದ ಎಸುಗಿರುವಿರೆಂದು ನಿನ್ನ ಮೇಲೆ ಆರೋಪಣೆ ಇದೆ ಮತ್ತು ಸದ್ರಿ ಆರೋಪಣೆಯನ್ನು ಈ ನ್ಯಾಯಾಲಯದ ಅಧಿಕಾರ ವ್ಯಾಪ್ತಿಯಲ್ಲಿ ಮಾಡಿರುತ್ತೀಯಾ ಎಂದು ಆರೋಪಿಸಲಾಗಿದೆ. ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

**ಪ್ರಶ್ನೆಃ 5. ಫ್ರಾಸಾಃ1** ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ತಾನು ಈ ಪ್ರಕರಣದಲ್ಲಿ ಪಿರ್ಯಾದಿ ಸೊಸೈಟಿಯ ವ್ಯವಸ್ಥಾಪಕನಾಗಿರುತ್ತೇನೆ ಎಂದು, ಈ ದಿನ ಸತ್ಯಾಪನಾ ಹೇಳಿಕೆಯ ಪ್ರಮಾಣ ಪತ್ರವನ್ನು ಪತ್ರ ರೂಪದಲ್ಲಿ ಹಾಜರುಪಡಿಸಿದ್ದೇನೆ ಎಂದು, ಅದರಲ್ಲಿ ಹೇಳಿರುವ ಸಂಗತಿಗಳೆಲ್ಲವೂ ಸತ್ಯ ಮತ್ತು ಅದನ್ನು ತಾನೇ ತಮ್ಮ ವಕೀಲರಿಗೆ ಹೇಳಿ ಬರೆಸಿ, ಸಹಿ ಮಾಡಿರುತ್ತೇನೆ ಎಂದು, ದಿಃ 08-10-2025 ರ ಕೆನರಾ ಬ್ಯಾಂಕ್ ನ ಚೆಕ್ ನ್ನು ನಿ.ಪಿ-1 ಎಂದು, ನಿ.ಪಿ-1 ರಲ್ಲಿರುವ ಆರೋಪಿಯ ಸಹಿಯನ್ನು ನಿ.ಪಿ-1(ಎ) ಎಂದು, ದಿಃ 08-10-2025 ರಂದು ಸದರಿ ನಿ.ಪಿ-1 ನ್ನು ಬ್ಯಾಂಕ್ ಶಾಖೆಯಲ್ಲಿ ನಗದಿಕರಣಕ್ಕಾಗಿ ಹಾಜರುಪಡಿಸಿರುವ ಕೌಂಟರ್ ಚಲನ್ ನ್ನು ನಿ.ಪಿ-2 ಎಂದು, ಸದರಿ ನಿ.ಪಿ-1 ಚೆಕ್ ಅಮಾನ್ಯಗೊಂಡ ಬಗ್ಗೆ ಒಂದು ಬ್ಯಾಂಕ್ ಹಿಂಬರಹವನ್ನು ನಿ.ಪಿ-3 ಎಂದು, ನಿ.ಪಿ-1 ಅಮಾನ್ಯಗೊಂಡ ಬಗ್ಗೆ ದಿಃ 29-10-2025 ರಂದು ಆರೋಪಿಗೆ ನೀಡಿದ ಲೀಗಲ್ ನೋಟೀಸ್ ನ ಕಚೇರಿ ಪ್ರತಿಯನ್ನು ನಿ.ಪಿ-4 ಎಂದು, ಅಂಚೆ ರಶೀಧಿಯನ್ನು ನಿ.ಪಿ-5 ಎಂದು, ನಿ.ಪಿ-4 ನೋಟೀಸ ನೊಂದಾಯಿತ ಅಂಚೆ ಮೂಲಕ ಕಳುಹಿಸಿದ್ದು, ಸದರಿ ನೋಟೀಸ್ ಆರೋಪಿಗೆ ದಿಃ 01-11-2025 ರಂದು ಜಾರಿಯಾದ ಬಗ್ಗೆ ಅಂಚೆ ಸ್ವೀಕೃತಿಯನ್ನು ನಿ.ಪಿ-6 ಎಂದು, ಗುರುತಿಸಿ ಸಾಕ್ಷ್ಯವನ್ನು ನುಡಿದಿರುತ್ತಾರೆ, ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

**ಪ್ರಶ್ನೆಃ 6** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-1 ಚೆಕ್ಕಿನ ನಂ 394358 ನಿಮ್ಮ ಕೆನರಾ ಬ್ಯಾಂಕ್ ಖಾತಾ ನಂ.03382210009466 ಖಾತೆಗೆ ಸಂಬಂಧಿಸಿದ ಚೆಕ್ ಆಗಿರುತ್ತದೆ ಎಂಬುದನ್ನು ಓಪ್ಪಿಕೊಳ್ಳವಿರಾ?

**ಉತ್ತರಃ**

**ಪ್ರಶ್ನೆಃ 7** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-1 ಚೆಕ್ಕಿನ ನಂ 394358 ಮೇಲಿನ ಸಹಿ ನಿಮ್ಮದೇ ಎಂದು ಓಪ್ಪಿಕೊಳ್ಳುವಿರಾ?

**ಉತ್ತರಃ**

**ಪ್ರಶ್ನೆಃ 8** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-1 ಚೆಕ್ಕಿನ ನಂ 394358 ನ್ನು ಪಿರ್ಯಾದಿ ಸೊಸೈಟಿಗೆ ನೀಡಿರುವುದಾಗಿ ನೀವು ಓಪ್ಪಿಕೊಳ್ಳುವಿರಾ?

**ಉತ್ತರಃ**

**ಪ್ರಶ್ನೆಃ 9** ನೀವು ಪಿರ್ಯಾದಿ ಸೊಸೈಟಿಯಲ್ಲಿ ಸಾಲದ ಖಾತೆ ನಂಃ BL-1101200001643 ನ್ನು ಹೊಂದಿರುವಿರಾ?

**ಉತ್ತರಃ**

**ಪ್ರಶ್ನೆಃ 10** ಪಿರ್ಯಾದಿ ಸೊಸೈಟಿಯಿಂದ ದಿನಾಂಕ 08.04.2024 ರಂದು ರೂ. 20,00,000/- ಸಾಲವನ್ನು ಪಡೆದಿರುವಿರಾ?

**ಉತ್ತರಃ**

**ಪ್ರಶ್ನೆಃ 11** ಈ ಪ್ರಕರಣದಲ್ಲಿ ಹಾಜರು ಪಡಿಸಿದ ನಿ.ಪಿ-1 ಚೆಕ್ಕಿನ ನಂ 394358 ದಿನಾಂಕ 08.10.2025 ರಲ್ಲಿ ನಮೂದಿಸಿದ ರೂ. 5,00,000/- ನ್ನು ( ಐದು ಲಕ್ಷ ರೂಪಾಯಿ ಮಾತ್ರ) ಪಿರ್ಯಾದಿ ಸೊಸೈಟಿಗೆ ಪಾವತಿ ಮಾಡುವ ಭಾಧ್ಯತೆಯನ್ನು ನೀವು ಒಪ್ಪಿಕೊಳ್ಳುವಿರಾ?

**ಉತ್ತರಃ**

ಪ್ರಶ್ನೆಃ **12** ಈ ಹಂತದಲ್ಲಿ ಈ ಪ್ರಕರಣವನ್ನು ರಾಜೀ ಮಾಡಿಕೊಳ್ಳಲು ಇಚ್ಚಿಸುವಿರಾ?

**ಉತ್ತರಃ**

ಪ್ರಶ್ನೆಃ **13**. ಈ ಪ್ರಕರಣದಲ್ಲಿ ನಿನಗೆ ಇನ್ನು ಏನಾದರೂ ಹೇಳುವುದು ಇದೆಯೇ ?

**ಉತ್ತರಃ**

ಪ್ರಶ್ನೆಃ **14**. ನಿನ್ನ ಪರವಾಗಿ ಏನಾದರೂ ಸಾಕ್ಷಿ ಅಥವಾ ದಾಖಲೆಗಳನ್ನು ಹಾಜರುಪಡಿಸುವಿರಾ?

**ಉತ್ತರಃ**

ಫಿರ್ಯಾದುದಾರರ ಪರ ಸಾಕ್ಷಿದಾರರ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ದಿನಾಂಕಃ **07-01-2026** ರಂದು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

**ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ.,ಸಿದ್ದಾಪುರ.**

**ಪ್ರಶ್ನೆಃ 10** ಪಿರ್ಯಾದಿ ಸೊಸೈಟಿಯಿಂದ ಪಡೆದ ಸಾಲದ ಹಣದಿಂದ TOYOTA GLANZA V.(AMT) Petrol vehicle bearing KA.No.31-P-9678 ನ್ನು ಖರೀದಿಸಿರುವಿರಾ?

**ಉತ್ತರಃ**

**ಪ್ರಶ್ನೆಃ 11** ನೀವು ಪಿರ್ಯಾದಿ ಸೊಸೈಟಿಯಲ್ಲಿ ಸಾಲದ ಖಾತೆ ನಂಃ 00201001183 ನ್ನು ಹೊಂದಿರುವಿರಾ?

**ಉತ್ತರಃ**